ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ: ಎಸಿ2(ಎಸ್)/18/2022-23

ದಿನಾಂಕ: 02.11.2022

## ಸುತ್ತೋಲೆ

**ವಿಷಯ**:- ವಿಶ್ವವಿದ್ಯಾನಿಲಯದ ಅರ್ಹ ಪರಿಶಿಷ್ಟ ಜಾತಿ/ ವರ್ಗದ ವಿದ್ಯಾರ್ಥಿಗಳಿಗೆ ಷರತ್ತಿಗೆ ಒಳಪಟ್ಟು ಶುಲ್ಕ ವಿನಾಯಿತಿಯಡಿ ಪ್ರವೇಶಾತಿ ನೀಡುವುದರ ಬಗೆಗೆ.

**ಉಲ್ಲೇಖ**: .
1. ಸರ್ಕಾರದ ಆದೇಶ ಸಂಖ್ಯೆ: ಸಕಇ 80 ಪಕವಿ 2013, ಬೆಂಗಳೂರು, ದಿನಾಂಕ: 02.07.2013.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 518 ಬಿಎಂಎಸ್ 2013, ದಿನಾಂಕ: 03.09.2013.
3. ವಿಶ್ವವಿದ್ಯಾನಿಲಯ ಸುತ್ತೋಲೆ ಸಂಖ್ಯೆ: ಎಸಿ2 (ಎಸ್)/13/2021-22, ದಿನಾಂಕ: 20.12.2021.
4. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಪತ್ರದ ಸಂಖ್ಯೆ: ಜಂನಿ/ಸಕಇ/ಮೈ/ಶಿಕ್ಷಣ/ಸಿಆರ್01/2021-22 ದಿನಾಂಕ: 04.08.2022.
5. ಸಹಾಯಕ ನಿರ್ದೇಶಕರು ಗ್ರೇಡ್-1 ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಮೈಸೂರು ತಾಲ್ಲೂಕು ರವರ ಪತ್ರದ ಸಂಖ್ಯೆ: ಸನಿಗ್ರೇಡ್-1/ಮೈ/ಶಿಕ್ಷಣ/ಸಿಆರ್/2022-23, ದಿನಾಂಕ: 05.09.2022.
6. ಮಾನ್ಯ ಕುಲಪತಿಗಳ ಆದೇಶ ದಿನಾಂಕ: 01.11.2022.

*****

2019-20ನೇ ಶೈಕ್ಷಣಿಕ ಸಾಲಿನಿಂದ State Scholarship portal ನ ಮುಖಾಂತರ ವಿನಾಯಿತಿ ನೀಡಿದ ಶುಲ್ಕವನ್ನು ಶಿಕ್ಷಣ ಸಂಸ್ಥೆಗಳಿಗೆ ಮರುಭರಿಕೆ ಮಾಡದೆ ಆಯಾ ವಿದ್ಯಾರ್ಥಿಗಳ ಖಾತೆಗಳಿಗೆ ನೇರವಾಗಿ ಸಂದಾಯ ಮಾಡಲಾಗುತ್ತಿದೆ. ಭಾರತ ಸರ್ಕಾರವು ಹೊರಡಿಸಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26) ಪ್ರಕಾರ ವಿದ್ಯಾರ್ಥಿಗಳ ಖಾತೆಗೆ ಜಮಾ ಮಾಡಿದ 07 ದಿನಗಳ ಒಳಗಡೆ ವಿದ್ಯಾರ್ಥಿಯು ಸಂಬಂಧಿಸಿದ ಕಾಲೇಜಿಗೆ ಸದರಿ ಹಣವನ್ನು ಪಾವತಿಸಬೇಕೆಂದು ತಿಳಿಸಲಾಗಿರುತ್ತದೆ.

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಶೇ.60 ರಷ್ಟು ಹೆಚ್ಚು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು 2019-20 ರಿಂದ 2021-22 ರವರೆಗೆ ಸದರಿ ವಿದ್ಯಾರ್ಥಿಗಳಿಂದ ಬರಬೇಕಾದ ಶುಲ್ಕಗಳು ಶಿಕ್ಷಣ ಸಂಸ್ಥೆಗಳಿಗೆ ಸಂದಾಯವಾಗದೆ, ವಿಶ್ವವಿದ್ಯಾನಿಲಯಕ್ಕೆ ಭಾರಿ ನಷ್ಟವುಂಟಾಗಿ, ಶೈಕ್ಷಣಿಕ ಅಭಿವೃದ್ಧಿ ಕೆಲಸಗಳಿಗೆ ಮತ್ತು ತಾತ್ಕಾಲಿಕ ನೌಕರರುಗಳಿಗೆ ವೇತನ ಪಾವತಿಸಲು ಕಷ್ಟಕರವಾಗುತ್ತಿದೆ.

ಆರ್ಥಿಕ ಮುಗ್ಗಟ್ಟಿನಿಂದ ಇದುವರೆವಿಗೂ ಶುಲ್ಕಗಳನ್ನು ಪಾವತಿಸದೆ, ಉಲ್ಲೇಖ (4) ಮತ್ತು (5) ರ ಪತ್ರಗಳನುಸಾರ ಹಾಗೂ ಮಾನ್ಯ ಕುಲಪತಿಗಳ ಅನುಮೋದನೆಯ ಮೇರೆಗೆ ಶುಲ್ಕ ವಿನಾಯತಿಯಡಿ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ SSPಯಲ್ಲಿ ಅರ್ಜಿ ಸಲ್ಲಿಸಿರುವುದರ ಬಗ್ಗೆ ಖಚಿತಪಡಿಸಿಕೊಂಡು ವಿದ್ಯಾರ್ಥಿವೇತನ ಮರುಭರಿಕೆಯಾದ ಕೂಡಲೇ ಭಾರತ ಸರ್ಕಾರವು ಹೊರಡಿಸಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ ಷರತ್ತಿಗೊಳಪಟ್ಟು ಶುಲ್ಕವನ್ನು ಆಯಾ ವರ್ಷದ ವಾರ್ಷಿಕ ಪರೀಕ್ಷೆಗೂ ಮುನ್ನ ವಿಶ್ವವಿದ್ಯಾನಿಲಯಕ್ಕೆ ಪ್ರವೇಶಾತಿ ಮತ್ತು ಪರೀಕ್ಷಾ ಶುಲ್ಕ ಪಾವತಿಸುವ ಸಂಬಂಧ ಸರ್ಕಾರ ಮತ್ತು ವಿಶ್ವವಿದ್ಯಾನಿಲಯದ ನಿಯಮಗಳಿಗೆ ಬದ್ಧರಾಗಿರುವುದರ ಬಗ್ಗೆ ಸೂಕ್ತ ಮುಚ್ಚಳಿಕೆಯನ್ನು ವಿದ್ಯಾರ್ಥಿಗಳಿಂದ ಪಡೆದು ಶುಲ್ಕ ವಿನಾಯಿತಿ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

2/11/2022

ಕುಲಸಚಿವ

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು.

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ ಸ್ನಾತಕ/ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

ಪು.ತಿ.ನೊ

3. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು.
4. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ನಿರ್ದೇಶಕರು, ಯೋಜನೆ, ಉಸ್ತುವಾರಿ ಮತ್ತು ಮೌಲ್ಯಮಾಪನ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಮಂಡ್ಯ/ಹಾಸನ/ಚಾಮರಾಜನಗರ.
9. ಪ್ರೊ.ಎಂ.ಎ.ಶ್ರೀಧರ್, ಚೀಫ್ ನೋಡಲ್ ಆಫೀಸರ್ ಸಿ.ಬಿ.ಸಿ.ಎಸ್.-ಸಿ.ಎ.ಜಿ.ಪಿ. ರೆಗ್ಯುಲೇಷನ್ಸ್, ಭೌತಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
10. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.
11. ನಿರ್ದೇಶಕರು, ಅಂತರಾಷ್ಟ್ರೀಯ ಕೇಂದ್ರ, ಲಲಿತ ಕಲೆಗಳ ಕಾಲೇಜು ಕಟ್ಟಡ, ಮಾನಸಗಂಗೋತ್ರಿ, ಮೈಸೂರು.
12. ವಿಶೇಷಾಧಿಕಾರಿಗಳು, ಕುಲಪತಿಗಳ ಕಛೇರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಸಂಯೋಜಕರು, ಐ.ಸಿ.ಡಿ., ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
14. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಆಡಳಿತ ವಿಭಾಗ ಮತ್ತು ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
15. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ಕಛೇರಿ ಪ್ರತಿ.

[signature] 4/4/2022

ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು